# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಡಾ:ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 2056 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 23.03.2022. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಅನುಭವ ಮಂಟಪ ಕಾಮಗಾರಿ ಸ್ಥಾಪನೆಯಾಗಿ 1 ವರ್ಷವಾದರೂ ಇಲ್ಲಿಯವರೆಗೆ ಕಾಮಗಾರಿ ಪ್ರಾರಂಭವಾಗದಿರುವುದಕ್ಕೆ ಕಾರಣವೇನು; ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನವೆಷ್ಟು; (ವಿವರ ನೀಡುವುದು) | ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ನಿರ್ಮಾಣ ಕಾಮಗಾರಿಗಾಗಿ ದಿನಾಂಕ:03.03.2022 ರಂದು ಟೆಂಡರ್ ಆಹ್ವಾನಿಸಲಾಗಿದೆ.<br>ನೂತನ ಅನುಭವ ಮಂಟಪ ನಿರ್ಮಾಣ ಕಾಮಗಾರಿಗಾಗಿ ಇದುವರೆಗೆ ರೂ.200.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |
| ಆ) | ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು) | ನೂತನ ಅನುಭವ ಮಂಟಪ ನಿರ್ಮಾಣ ಕಾಮಗಾರಿಯನ್ನು 3 ವರ್ಷಗಳ ಅವಧಿಯಲ್ಲಿ ಪೂರ್ಣಗೊಳಿಸಲು ಟೆಂಡರ್‌ನಲ್ಲಿ ನಿರ್ಧಿಷ್ಟಪಡಿಸಲಾಗಿದೆ. |

ಸಂಖ್ಯೆ: ಕಂಇ 59 ಆರ್‌ಇಹೆಚ್ 2022

(ಆರ್.ಅಶೋಕ)
ಕಂದಾಯ ಸಚಿವರು.

**<u>ಮಾನ್ಯ ವಿಧಾನ ಸಭಾ ಸದಸ್ಯರಾದ ಡಾ: ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:2056ಕ್ಕೆ ಪೂರಕ ಟಿಪ್ಪಣಿ</u>**

- ಬೀದರ್ ಜಿಲ್ಲೆಯ ಬಸವಕಲ್ಯಾಣ ಪಟ್ಟಣದಲ್ಲಿನ ಮತ್ತು ಅದರ ಸುತ್ತಮುತ್ತಲಿನ ಪರಂಪರೆ ತಾಣಗಳನ್ನು ಅಂತರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ, ಸಾಂಸ್ಕೃತಿಕ ಮತ್ತು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಗೊಳಿಸಲು ಹಾಗೂ ಅದನ್ನು ನಿರ್ವಹಿಸಲು ದಿನಾಂಕ:05.04.2005 ರಂದು ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯ ಅಧಿನಿಯಮವನ್ನು ರಚಿಸಲಾಗಿದೆ.

- ಅನುಭವ ಮಂಟಪ ನಿರ್ಮಾಣ ಮಾಡುವ ಕುರಿತು ಸೂಕ್ತ ಸ್ಥಳ, ನೀಲ-ನಕ್ಷೆ, ವಿನ್ಯಾಸಗೊಳಿಸಿ ಕ್ರಮ ಕೈಗೊಳ್ಳುವ ಅವಶ್ಯಕತೆ ಇರುವುದರಿಂದ, ದಿನಾಂಕ:20.05.2016 ರಂದು ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಲಾದಂತೆ ಬಸವಕಲ್ಯಾಣ ಅಭಿವೃದ್ಧಿ ಮಂಡಳಿಗೆ ಇತಿಹಾಸಕಾರರ ತಜ್ಞರ ಸಮಿತಿಗೆ "ಶ್ರೀ ಗೋ.ರು.ಚನ್ನಬಸಪ್ಪ" ಇವರನ್ನು ಅಧ್ಯಕ್ಷರನ್ನಾಗಿ ಹಾಗೂ ಆರು ಸದಸ್ಯರುಗಳನ್ನು ಒಳಗೊಂಡಂತೆ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಕಂಇ 73 ಆರ್‌ಇಹೆಚ್ 2016, ದಿನಾಂಕ:31.01.2017 ರಲ್ಲಿ ರಚಿಸಿ ಆದೇಶಿಸಲಾಗಿದೆ. ಸದರಿ ಸಮಿತಿಯು ಸಲ್ಲಿಸಿರುವ ವಿಸ್ತೃತ ವರದಿಯಲ್ಲಿ ನೂತನ ಅನುಭವ ಮಂಟಪದ ನಿರ್ಮಾಣಕ್ಕೆ ಸುಮಾರು ರೂ.600.44 ಕೋಟಿಗಳಷ್ಟು ಅನುದಾನವನ್ನು ಅಂದಾಜಿಸಿರುತ್ತದೆ.

- **2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 233 ರಲ್ಲಿ ಬಸವಕಲ್ಯಾಣದಲ್ಲಿ 500 ಕೋಟಿ ರೂಪಾಯಿ ವೆಚ್ಚದಲ್ಲಿ "ಅನುಭವ ಮಂಟಪ"ವನ್ನು ನಿರ್ಮಿಸಲಾಗುವುದು ಎಂದು** ಹಾಗೂ ಈ ಉದ್ದೇಶಕ್ಕಾಗಿ 2020-21ನೇ ಸಾಲಿನಲ್ಲಿ ರೂ.100.00 ಕೋಟಿಗಳನ್ನು ಒದಗಿಸಲಾಗುವುದು ಎಂದು ಘೋಷಿಸಲಾಗಿದೆ. ಅದರಂತೆ 2020-21 ನೇ ಸಾಲಿನ ಆಯವ್ಯಯದಡಿ ರೂ.100.00 ಕೋಟಿಗಳನ್ನು ಹಾಗೂ ಪೂರಕ ಅಂದಾಜುಗಳ 3ನೇ ಕಂತಿನಲ್ಲಿ ಹೆಚ್ಚುವರಿ ಅನುದಾನ ರೂ.100.00 ಕೋಟಿಗಳನ್ನು ಹೀಗೆ ಒಟ್ಟು ರೂ.200.00 ಕೋಟಿಗಳನ್ನು ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗಿದೆ.

- ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವ "ನೂತನ ಅನುಭವ ಮಂಟಪ" ನಿರ್ಮಾಣಕ್ಕಾಗಿ ರೂ.560.00 ಕೋಟಿಗಳ ಪರಿಷ್ಕೃತ ಅಂದಾಜು ವೆಚ್ಚದ ವಿಸ್ತೃತ ಯೋಜನಾ ವರದಿಗೆ ಸಚಿವ ಸಂಪುಟದ ಅನುಮೋದನೆಯೊಂದಿಗೆ ದಿನಾಂಕ: 11.02.2022 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅದರನ್ವಯ ದಿನಾಂಕ:03.03.2022 ರಂದು ಟೆಂಡರ್ ಆಹ್ವಾನಿಸಲಾಗಿದೆ.

......